# ಕರ್ನಾಟಕ ವಿಧಾನ ಸಭೆ

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 66 (92) |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.02.2023 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಂಸ್ಕೃತ ಭಾಷೆಯ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಸಂಸ್ಕೃತ ಭಾಷೆಯನ್ನು ಕಲಿಯುವವರಿಗೆ ಸರ್ಕಾರ ಯಾವ ರೀತಿಯ ಪ್ರೋತ್ಸಾಹ ನೀಡುತ್ತಿದೆ: (ವಿವರ ನೀಡುವುದು) | **ಸಂಸ್ಕೃತ ಭಾಷಾ ಶಿಕ್ಷಣದ ಅಭಿವೃದ್ಧಿಗಾಗಿ ಶಿಕ್ಷಣ ಇಲಾಖೆಯಿಂದ ಕೈಗೊಂಡ ಕ್ರಮಗಳು**<br>1. 6 ನೇ ತರಗತಿಯಿಂದ 7ನೇ ತರಗತಿಯವರೆಗೆ ತೃತೀಯ ಭಾಷೆ ಸಂಸ್ಕೃತವನ್ನು ಓದಲು ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ಅವಕಾಶ ಕಲ್ಪಿಸಿ ಪಠ್ಯಪುಸ್ತಕವನ್ನು ಸಿದ್ಧಪಡಿಸಿ ನೀಡಲಾಗುತ್ತಿದೆ.<br>2. ಪ್ರೌಢಶಾಲೆಯಲ್ಲಿ 8,9 ಮತ್ತು 10ನೇ ತರಗತಿಯಲ್ಲಿ ಪ್ರಥಮ ಭಾಷೆ ಮತ್ತು ತೃತೀಯ ಭಾಷೆ ಸಂಸ್ಕೃತವನ್ನು ಅಧ್ಯಯನ ಮಾಡಲು ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ಅವಕಾಶ ಕಲ್ಪಿಸಿ ಪಠ್ಯಪುಸ್ತಕವನ್ನು ಸಿದ್ಧಪಡಿಸಿ ನೀಡಲಾಗುತ್ತಿದೆ.<br>3. ಸರ್ಕಾರಿ ಪ್ರೌಢಶಾಲೆಗಳಲ್ಲಿ 56 ಸಂಸ್ಕೃತ ಶಿಕ್ಷಕರು ಮತ್ತು ಅನುದಾನಿತ ಪ್ರೌಢಶಾಲೆಗಳಲ್ಲಿ 56 ಸಂಸ್ಕೃತ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸಾಕಷ್ಟು ಖಾಸಗಿ ಪ್ರೌಢಶಾಲೆಗಳಲ್ಲಿ ಸಂಸ್ಕೃತ ಭಾಷೆಯ ಬೋಧನೆ ನಡೆಯುತ್ತಿದೆ.<br>4. 2022-23 ನೇ ಸಾಲಿನ ಕಲಿಕಾ ಚೇತರಿಕೆ ವರ್ಷ ಆಚರಣೆ ಪ್ರಯುಕ್ತ 8 ಮತ್ತು 9ನೇ ತರಗತಿಗಳಿಗೆ ಪ್ರಥಮ ಭಾಷೆ ಮತ್ತು ತೃತೀಯ ಭಾಷೆ ಸಂಸ್ಕೃತ ಪಠ್ಯಪುಸ್ತಕ ಸಂಬಂಧಿಸಿದಂತೆ ಕಲಿಕಾ ಹಾಳೆಗಳು ಮತ್ತು ಶಿಕ್ಷಕರ ಕೈಪಿಡಿಯನ್ನು ಸಿದ್ಧಪಡಿಸಿದ್ದು, ಕಲಿಕಾ ಗುಣಮಟ್ಟವನ್ನು ಉತ್ತಮಪಡಿಸಲು ಪ್ರಯತ್ನಿಸಲಾಗಿದೆ. ಸರ್ಕಾರಿ ಸಂಸ್ಕೃತ ಶಿಕ್ಷಕರಿಗೆ ಎರಡು ದಿನಗಳ ಕಲಿಕಾ ಚೇತರಿಕೆ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.<br>5. ಸಂಸ್ಕೃತ ಭಾಷೆಯಲ್ಲಿ ಸಂಸ್ಕೃತ ಶಿಕ್ಷಕರಿಗೆ ಆನ್-ಲೈನ್ ತರಬೇತಿಗಾಗಿ ಮಾಡ್ಯೂಲ್, CUPLETS (ADDITIONAL RESOURCE INFORMATION CARDS) ಮಾಹಿತಿ ವಿಡಿಯೋ ಕೋರ್ಸ್ಗಳನ್ನು ಸಿದ್ಧಪಡಿಸಿ ದೀಕ್ಷಾ ಪೋರ್ಟ್ ಲ್ ನಲ್ಲಿ ಅಪ್ಲೋಡ್ ಮಾಡಲಾಗಿದೆ ಎಲ್ಲಾ ಸಂಸ್ಕೃತ ಶಿಕ್ಷಕರು ಇದರ ಪ್ರಯೋಜನ ಪಡೆದಿಕೊಳ್ಳುತ್ತಿದ್ದಾರೆ.<br><br>**ಸಂಸ್ಕೃತ ಭಾಷೆ ಕಲಿಯುವವರಿಗೆ ಪ್ರೋತ್ಸಾಹ**<br>1. ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳಲ್ಲಿ ಪ್ರಥಮ ಭಾಷೆ ಮತ್ತು ತೃತೀಯ ಭಾಷೆ ಸಂಸ್ಕೃತ ಅಧ್ಯಯನ ಮಾಡುತ್ತಿರುವ 8,9 ಮತ್ತು 10 ನೇ ತರಗತಿಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ಹಿಂದಿನಿಂದಲೂ |

| | | |
|---|---|---|
| | | ನೀಡುತ್ತಿದ್ದು, ಕೋವಿಡ್ ಕಾರಣದಿಂದ ಸ್ಥಗಿತಗೊಂಡಿದ್ದು, ಪುನಃ ಪ್ರಾರಂಭಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ.<br>2. ಈ ಹಿಂದೆ 2010ರವರೆಗೆ ಸಂಸ್ಕೃತ ಪಾಠಶಾಲೆಗಳ ಹಾಗೂ ಸಂಸ್ಕೃತ ಕಾಲೇಜುಗಳ ಶೈಕ್ಷಣಿಕ ಮತ್ತು ಆಡಳಿತಾತ್ಮಕ ನಿರ್ವಹಣೆಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಸ್ಕೃತ ವಿಭಾಗದಲ್ಲಿ ನಿರ್ವಹಿಸಲಾಗುತ್ತಿತ್ತು. ಸಂಸ್ಕೃತ ಭಾಷಾಭಿವೃದ್ಧಿಗಾಗಿ ಹೆಚ್ಚಿನ ಉತ್ತೇಜನ ನೀಡಲು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡಲಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ:ಇಡಿ 87 ಯುಪಿಸಿ 2010, ದಿನಾಂಕ:15.10.2010ರನ್ವಯ ಸಂಸ್ಕೃತ ವಿಭಾಗದಲ್ಲಿನ ಸಂಸ್ಕೃತ ಪಾಠಶಾಲೆಗಳ ಹಾಗೂ ಸಂಸ್ಕೃತ ಕಾಲೇಜುಗಳ ಶೈಕ್ಷಣಿಕ ಮತ್ತು ಆಡಳಿತಾತ್ಮಕ ನಿರ್ವಹಣೆಯ ಎಲ್ಲಾ ಕಡತಗಳನ್ನು ಹಾಗೂ ಆಡಳಿತ ವ್ಯವಹಾರಗಳನ್ನು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಲಾಗಿರುತ್ತದೆ. |
| ಆ | 10 ನೇ ತರಗತಿಯವರೆಗೆ ಸಂಸ್ಕೃತ ಕಲಿತ ವಿದ್ಯಾರ್ಥಿಗಳಿಗೆ ಸರ್ಕಾರ ಸೇವೆ ಮತ್ತು ಉನ್ನತ ಶಿಕ್ಷಣದಲ್ಲಿ ಮೀಸಲಾತಿ ನೀಡುವ ಕುರಿತು ಸರ್ಕಾರ ನಿಲುವೇನು: ಈ ಕುರಿತು ಕ್ರಮ ಕೈಗೊಳ್ಳುವುದೆ: (ವಿವರ ನೀಡುವುದು) | ಇಂತಹ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |
| ಇ | ಸಂಸ್ಕೃತ ಭಾಷೆಯನ್ನು ಪ್ರಾಥಮಿಕ ಶಾಲಾ ಹಂತದಲ್ಲೇ ಕಲಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | |

ಸಂಖ್ಯೆ:ಇಪಿ 23 ಎಲ್‌ಬಿಪಿ 2023

(ಬಿ.ಸಿ ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ
ಸಚಿವರು